**ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಮರಿತಿಬ್ಬೇಗೌಡ ಇವರು ನಿಯಮ-72ರಡಿಯಲ್ಲಿ ಮಂಡಿಸಿರುವ ಗಮನ ಸೆಳೆಯುವ ಸೂಚನೆಗೆ ಸರ್ಕಾರದ ಉತ್ತರ:**

**ವಿಷಯ:**

ಅನುದಾನಿತ ಶಾಲಾ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋಧಕ/ಬೋಧಕೇತರರಿಗೆ ಯಾವುದೇ ಆರೋಗ್ಯ ವಿಮಾ ಯೋಜನೆಯ ಸೌಲಭ್ಯವಿಲ್ಲದೆ ಇವರುಗಳು ದೀರ್ಘ ಕಾಲದಿಂದ ತುಂಬಾ ತೊಂದರೆಗೊಳಗಾಗಿದ್ದಾರೆ. ಆದಕಾರಣ, ಇವರನ್ನು ಜ್ಯೋತಿ ಸಂಜೀವಿನಿ ಯೋಜನೆಯ ವ್ಯಾಪ್ತಿಗೆ ತರದೆ ಇರುವುದರಿಂದ ಉಂಟಾಗಿರುವ ಗಂಭೀರ ಸಮಸ್ಯೆಯ ಕುರಿತು ಪ್ರಸ್ತಾಪಿಸಲಾಗಿದೆ.

**ಉತ್ತರ:**

ಅನುದಾನಿತ ಶಾಲಾ ಕಾಲೇಜುಗಳ ನೌಕರರು ಕರ್ನಾಟಕ ಶಿಕ್ಷಣ ಅಧಿನಿಯಮ, 1983 ಮತ್ತು ಅದರಡಿ ರಚಿಸಲ್ಪಟ್ಟ ಕರ್ನಾಟಕ ಶಿಕ್ಷಣ ಸಂಸ್ಥೆಗಳ (classification, regulation and prescription of curricula) ನಿಯಮಗಳು, 1995ರ ವ್ಯಾಪ್ತಿಗೆ ಒಳಪಡುತ್ತಾರೆ. ಇವರನ್ನು ಸರ್ಕಾರಿ ನೌಕರರೆಂದು ಪರಿಗಣಿಸಲಾಗುವುದಿಲ್ಲ.ಆದುದರಿಂದ ಅನುದಾನಿತ ಸಿಬ್ಬಂದಿಗಳು ಜ್ಯೋತಿ ಸಂಜೀವಿನಿ ಯೋಜನೆಯ ವ್ಯಾಪ್ತಿಗೆ ಬರುವುದಿಲ್ಲ.

ಅನುದಾನಿತ ಶಿಕ್ಷಣ ಸಂಸ್ಥೆಗಳ ಸಿಬ್ಬಂದಿಗಳು ಕರ್ನಾಟಕ ಸರ್ಕಾರಿ ನೌಕರರ (ವೈದ್ಯಕೀಯ ಹಾಜರಾತಿ) ನಿಯಮಗಳು 1963ರ ವ್ಯಾಪ್ತಿಗೆ ಒಳಪಡುವುದಿಲ್ಲ ಹಾಗೂ ಕರ್ನಾಟಕ ಶಿಕ್ಷಣ ಸಂಸ್ಥೆಗಳು (ಖಾಸಗಿ ಅನುದಾನಿತ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಂಸ್ಥೆಗಳ ನೌಕರರ ನೇಮಕಾತಿ ಹಾಗೂ ಸೇವಾ ಷರತ್ತು ಹಾಗೂ ನಿಬಂಧನೆಗಳು) ನಿಯಮಗಳು 1999ರ ಅನುಬಂಧ-ii (3)ರನ್ವಯ ವೈದ್ಯಕೀಯ ವೆಚ್ಚ ಮರುಪಾವತಿ ಸೌಲಭ್ಯಕ್ಕೂ ಅರ್ಹರಾಗಿರುವುದಿಲ್ಲ.

ಸಂ:ಇಪಿ 53 ಎಸ್‌ಇಎಸ್ 2021

S. S—

(ಎಸ್ .ಸುರೇಶ್ ಕುಮಾರ್)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ
ಹಾಗೂ ಸಕಾಲ ಸಚಿವರು